ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
**KARNATAKA LEGISLATIVE ASSEMBLY, RESEARCH AND REFERENCE BRANCH**

## ಪತ್ರಿಕಾ ತುಣುಕುಗಳು
## PAPER CLIPPINGS

7

ಇಲಾಖೆ / ವಿಷಯ : DEPARTMENT / SUBJECT: ಗೃಹ - ಡ್ರಗ್ಸ್ ಪೆಡ್ಲರ್

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯ ಕರ್ನಾಟಕ ದಿನಾಂಕ : DATE : 11/9/2020

# 6 ಡ್ರಗ್ ಪೆಡ್ಲರ್‌ಗಳ ಬಂಧನ

**ಬೆಂಗಳೂರು:** ಡ್ರಗ್ ಜಾಲದ ವಿರುದ್ಧ ಕಾರ್ಯಾಚರಣೆ ಮುಂದುವರಿಸಿರುವ ದಕ್ಷಿಣ ಡಿಸಿಪಿ ವಿಭಾಗದ ಪೊಲೀಸರು, ವಿದ್ಯಾರ್ಥಿಗಳು ಹಾಗೂ ಸಾಫ್ಟ್‌ವೇರ್ ಎಂಜಿನಿಯರ್‌ಗಳಿಗೆ ಕೊಕೇನ್ ಮಾರಾಟ ಮಾಡುತ್ತಿದ್ದ ವಿದೇಶಿ ಪ್ರಜೆ ಸೇರಿ ಆರು ಮಂದಿಯನ್ನು ಬಂಧಿಸಿದ್ದಾರೆ.

ಆಫ್ರಿಕಾ ಮೂಲದ ಇಫ್ಸು ಮಂಡೆ ಇಜಿ(35) ಎಂಬಾತ ಬನಶಂಕರಿ ಪೊಲೀಸರ ಬಲೆಗೆ ಬಿದ್ದಿದ್ದು, ಈತನಿಂದ 10 ಗ್ರಾಂ ಕೊಕೇನ್, 1,360 ರೂ. ನಗದು ಹಾಗೂ 2 ಮೊಬೈಲ್‌ಗಳನ್ನು ಜಪ್ತಿ ಮಾಡಲಾಗಿದೆ. ಬಿಸಿನೆಸ್ ವೀಸಾದಡಿ ಬೆಂಗಳೂರಿಗೆ ಬಂದಿದ್ದ ಈತ ಹೆಗಡೆನಗರದಲ್ಲಿ ಬಾಡಿಗೆ ಮನೆ ಮಾಡಿಕೊಂಡಿದ್ದ. ನೈಜೀರಿಯಾದಿಂದ ಅಕ್ರಮವಾಗಿ ಕೊಕೇನ್ ತರಿಸಿ ವಿದ್ಯಾರ್ಥಿಗಳು ಹಾಗೂ ಟೆಕ್ಕಿಗಳಿಗೆ ಮಾರಾಟ ಮಾಡುತ್ತಿದ್ದ.

**ಅಂತಾರಾಜ್ಯ ಸ್ಮಗ್ಲರ್‌ಗಳಬಂಧನ:** ದಕ್ಷಿಣ ಡಿಸಿಪಿ ವಿಭಾಗದ ತಲಘಟ್ಟಪುರ ಠಾಣೆ ಪೊಲೀಸರು ನಡೆಸಿದ ಕಾರ್ಯಾಚರಣೆಯಲ್ಲಿ ಆಂಧ್ರ ಪ್ರದೇಶದಿಂದ ಬೆಂಗಳೂರಿಗೆ ಗಾಂಜಾ ತಂದು ಶ್ರೀಮಂತ ವಿದ್ಯಾರ್ಥಿಗಳಿಗೆ ಮಾರಾಟ ಮಾಡುತ್ತಿದ್ದ ಐವರು ಅಂತಾರಾಜ್ಯ ಡ್ರಗ್ಸ್ ಮಾರಾಟಗಾರರನ್ನು ಬಂಧಿಸಿದ್ದಾರೆ. ಒಡಿಶಾದ ಅಮನ್ ಪ್ರಧಾನ್(23), ಆಂಧ್ರ ಪ್ರದೇಶದ ಥರಪಟ್ಲಾ ಮೌಲಿ(25), ದುರ್ಗಾಪ್ರಸಾದ್(23), ಅಭಿಷೇಕ್(23) ಮತ್ತು ಉದಯ್(24) ಬಂಧಿತರು. ಇವರಿಂದ 10 ಕೆ.ಜಿ 270 ಗ್ರಾಂ ಗಾಂಜಾ, 300 ರೂ. ನಗದು, ಎರಡು ಬ್ಯಾಗ್ ಹಾಗೂ ಎರಡು ದ್ವಿಚಕ್ರ ವಾಹನಗಳನ್ನು ಜಪ್ತಿ ಮಾಡಲಾಗಿದೆ. ಎಚ್.ಎಂ.ವರ್ಲ್ಡ್ ಸಿಟಿ ಅಪಾರ್ಟ್‌ಮೆಂಟ್ ಮುಂಭಾಗದಲ್ಲಿ ಬ್ಯಾಗ್‌ಗಳಲ್ಲಿ ತುಂಬಿಕೊಂಡು ಇವರು ಮಾರಾಟಕ್ಕೆ ಸಿದ್ಧತೆ ನಡೆಸಿದ್ದರು.